**Akashvani : Bangalore**
**Regional Bulletin In Kannada**
**19.07.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**19.07.2025 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

- ಬೆಂಗಳೂರು ವಿಮಾನ ನಿಲ್ದಾಣದಲ್ಲಿ ೪೦ ಕೋಟಿ ರೂಪಾಯಿ ಮೊತ್ತದ ಮಾದಕ ವಸ್ತು ಜಪ್ತಿ

- ಮೈಸೂರಿನಲ್ಲಿ ರಾಜ್ಯ ಸರ್ಕಾರದ ೨ ವರ್ಷಗಳ ಸಾಧನಾ ಸಮಾವೇಶ - ೨ ಸಾವಿರದ ೫೭೮ ಕೋಟಿ ರೂಪಾಯಿ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ

- ರಾಜ್ಯ ಹೈಕೋರ್ಟ್ ನ್ಯಾಯಮೂರ್ತಿಗಳಾಗಿ ಜಯಂತ್ ಬ್ಯಾನರ್ಜಿ, ದಿನೇಶ್ ಕುಮಾರ್ ಸಿಂಗ್ ಪ್ರಮಾಣವಚನ

- ಪರಿಶಿಷ್ಟ ಸಮುದಾಯದಲ್ಲಿ ಒಳಮೀಸಲಾತಿ ಜಾರಿಗೆ ಬಿಜೆಪಿ ಆಗ್ರಹ ; ಆಗಸ್ಟ್ ೧೫ರ ಬಳಿಕ ರಾಜ್ಯಾದ್ಯಂತ ಹೋರಾಟ

**<><*<><>*><>**

ದೋಹಾದಿಂದ ಬೆಂಗಳೂರು ಅಂತಾರಾಷ್ಟ್ರೀಯ ಬೆಂಗಳೂರು ನಿಲ್ದಾಣಕ್ಕೆ ಆಗಮಿಸಿದ ಭಾರತೀಯ ಪ್ರಯಾಣಿಕನಲ್ಲಿ ಸುಮಾರು ೪೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಮಾದಕ ವಸ್ತು ಪತ್ತೆಯಾಗಿದೆ. ಕಂದಾಯ, ಗುಪ್ತಚರ, ನಿರ್ದೇಶನಾಲಯದ ಅಧಿಕಾರಿಗಳು ದಾಳಿ ನಡೆಸಿದ ವೇಳೆ ೪ ಕೆ.ಜಿ.ಗೂ ಅಧಿಕ ಕೊಕೇನ್ ಪತ್ತೆಯಾಗಿದೆ. ಬ್ಯಾಗ್ ತಪಾಸಣೆ ವೇಳೆ ೨ ಕಾಮಿಕ್ಸ್ ಪುಸ್ತಕಗಳು ಪತ್ತೆಯಾಗಿದ್ದು, ಪುಸ್ತಕದ ಕವರ್ ಮೇಲೆ ಸೀಲ್ ಮಾಡಿದ ರೀತಿಯಲ್ಲಿದ್ದ ಮಾದಕವಸ್ತುವನ್ನು ಅಧಿಕಾರಿಗಳು ಜಪ್ತಿ ಮಾಡಿದ್ದಾರೆ. ಪ್ರಯಾಣಿಕನನ್ನು ಎನ್‌ಡಿಪಿಎಸ್ ಕಾಯ್ದೆಯಡಿ ಬಂಧಿಸಲಾಗಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

**<><*<><>*><>**

ಅಭಿವೃದ್ಧಿಗೆ ಸರ್ಕಾರದ ಬಳಿ ಹಣ ಇಲ್ಲ ಎಂದು ಅಪಪ್ರಚಾರ ಮಾಡುತ್ತಿರುವ ಬಿಜೆಪಿಯವರಿಗೆ ಇವತ್ತಿನ ಅಭಿವೃದ್ಧಿ ಕಾರ್ಯಗಳೇ ಉತ್ತರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನಲ್ಲಿ ತಿಳಿಸಿದ್ದಾರೆ.ಸರ್ಕರದ ಎರಡು ವರ್ಷಗಳ ಸಾಧನಾ ಸಮಾವೇಶ ೨ ಸಾವಿರದ ೫೭೮ ಕೋಟಿ ರೂಪಾಯಿಗಳ ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಬಿಜೆಪಿ ಸ್ವಂತ ಶಕ್ತಿಯಿಂದ ಒಮ್ಮೆಯೂ ಅಧಿಕಾರಕ್ಕೆ ಬಂದಿಲ್ಲ ಎಂದು ತಿಳಿಸಿದ್ದಾರೆ. ರಾಜ್ಯದ ಜನರ ಪ್ರೀತಿ, ವಿಶ್ವಾಸ, ಅಭಿಮಾನ ಉಳಿಸಿಕೊಳ್ಳದ ಇವರಿಗೆ ಇವರಿಗೆ ನಮ್ಮ

ಸರ್ಕಾರದ ಬಗ್ಗೆ ಟೀಕಿಸುವ ನೈತಿಕತೆ ಇಲ್ಲ ಎಂದು ಹೇಳಿದ್ದಾರೆ. ಆಹಾರ ಭದ್ರತಾ ಕಾಯ್ದೆ, ಕಡ್ಡಾಯ ಶಿಕ್ಷಣ ಕಾಯ್ದೆ, ನರೇಗಾ ಎಲ್ಲವೂ ಆಗಿದ್ದು ಕಾಂಗ್ರೆಸ್ ಅವಧಿಯಲ್ಲಿ. ಬಿಜೆಪಿ ಅವಧಿಯಲ್ಲಿ ಇವರು ಏನು ಮಾಡಿದ್ದಾರೆ ತೋರಿಸಲಿ ಎಂದು ಸವಾಲು ಹಾಕಿದ್ದಾರೆ.

**<><*<><>*><>**

ಕರ್ನಾಟಕದ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯಾಗಿ ವಿಭು ಭಕ್ರು ಪ್ರಮಾಣ ವಚನ ಸ್ವೀಕರಿಸಿದರು. ರಾಜಭವನದಲ್ಲಿ ಇಂದು ನಡೆದ ಸಮಾರಂಭದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉಪಸ್ಥಿತರಿದ್ದರು. ಬಳಿಕ ಮಧ್ಯಾಹ್ನ ನಡೆದ ಸಮಾರಂಭದಲ್ಲಿ ಕರ್ನಾಟಕದ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾಗಿ ಜಯಂತ್ ಬ್ಯಾನರ್ಜಿ ಹಾಗೂ ದಿನೇಶ್ ಕುಮಾರ್ ಸಿಂಗ್ ಪ್ರಮಾಣವಚನ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ಕಾನೂನು ಸಚಿವ ಎಚ್.ಕೆ.ಪಾಟೀಲ್, ಕಂದಾಯ ಸಚಿವ ಕೃಷ್ಣಭೈರೇಗೌಡ ಉಪಸ್ಥಿತರಿದ್ದರು.

**<><*<><>*><>**

ಬೆಂಗಳೂರಿನ ಹೆಬ್ಬಾಳದಲ್ಲಿ ಮೆಟ್ರೋ ರೈಲು ನಿಗಮಕ್ಕೆ ನೀಡಲಾಗಿದ್ದ ಭೂಮಿಯನ್ನು ರಾಜ್ಯ ಸರ್ಕಾರ ೪೬ ಎಕರೆಗಳಿಂದ ಕೇವಲ ೯ ಎಕರೆಗಳಿಗೆ ಇಳಿಸಿದೆ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ರಿಯಲ್ ಎಸ್ಟೇಟ್ ಲಾಬಿ ಮತ್ತು ಅಕ್ರಮ ವಲಸಿಗರಿಗೆ ಲಾಭ ನೀಡುವ ಉದ್ದೇಶದಿಂದ ಭೂಮಿಯನ್ನು ಕಡಿತಗೊಳಿಸಲಾಗಿದೆ ಎಂದು ದೂರಿದ್ದಾರೆ. ಇದೇ ವೇಳೆ ಬೆಂಗಳೂರಿನ ಕಸ ವಿಲೇವಾರಿ ಬಗ್ಗೆ ಪ್ರಸ್ತಾಪಿಸಿದ ಅವರು, ಬಿಬಿಎಂಪಿ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**<><*<><>*><>**

ಚಿಕ್ಕಬಳ್ಳಾಪುರ ಜಿಲ್ಲೆಯ ಹಾರೋಬಂಡೆಯಲ್ಲಿ ಕೇಂದ್ರ ಹಣಕಾಸು ಸೇವೆಗಳ ವತಿಯಿಂದ ಹಣಕಾಸು ಸೇರ್ಪಡೆ ಪರಿಪೂರ್ಣತಾ ಅಭಿಯಾನ ನಡೆಯಿತು. ಸಾಮಾಜಿಕ ಭದ್ರತಾ ಯೋಜನೆಯಡಿಯಲ್ಲಿ ಸರ್ಕಾರದ ಪಿಎಂ ಜೆಜೆಬಿವೈ, ಪಿಎಂಎಸ್‌ಬಿವೈಎಪಿವೈ ಸೇರಿದಂತೆ ಹಲವು ಯೋಜನೆಗಳ ಬಗ್ಗೆ ಅಧಿಕಾರಿಗಳು ಮಾಹಿತಿ ನೀಡಿದರು. ದಕ್ಷಣ ಕನ್ನಡ ಜಿಲ್ಲೆಯ ಉಜಿರೆಯ ಎಸ್‌ಡಿಎಂ ಪದವಿ ಕಾಲೇಜಿನಲ್ಲಿ ಜನ ಸುರಕ್ಷಾ ಶಿಬಿರ ಮತ್ತು ಸೈಬರ್ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಈ ವೇಳೆ ಕೆ-ವೈಸಿ ಕುರಿತು ಆರ್‌ಬಿಐ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಲಾಯಿತು. ಸುಮಾರು ೩೮ ಪಿಎಂ ಜೆಜೆಬಿವೈ ಮತ್ತು ೬೩ ಪಿಎಂಎಸ್‌ಬಿವೈ ಅರ್ಜಿಗಳನ್ನು ಸ್ವೀಕರಿಸಲಾಯಿತು. ಕೋಲಾರ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಮತ್ತು ಆರ್ಥಿಕ ಸಾಕ್ಷರತಾ ಕೇಂದ್ರದ ಸಹಯೋಗದಲ್ಲಿ ಜಿಲ್ಲೆಯ ವಿಟ್ಟಪ್ಪನಹಳ್ಳಿ ಗ್ರಾಮದಲ್ಲಿ ಜನಸುರಕ್ಷಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಲೀಡ್ ಬ್ಯಾಂಕ್ ಮ್ಯಾನೇಜರ್ ಮಹದೇವ ಜೋಶಿ, ಮಾತನಾಡಿ, ಕೇಂದ್ರ ಸರ್ಕಾರದ ಪ್ರಮುಖ ಯೋಜನೆಗಳನ್ನು ಜನರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಜುಲೈ ೧ರಿಂದ ಸೆಪ್ಟೆಂಬರ್ ೩೦ ರವರೆಗೆ ಜನ ಸುರಕ್ಷ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ - ಮಹದೇವ್ ಜೋಶಿ, ಲೀಡ್ ಬ್ಯಾಂಕ್ ಮ್ಯಾನೆಜರ್**

**<><*<><>*><>**

ಸ್ವಚ್ಛ ಸರ್ವೇಕ್ಷಣಾ ಅಭಿಯಾನದ ಹಿನ್ನೆಲೆಯಲ್ಲಿ ಆಕಾಶವಾಣಿ ಸುದ್ದಿ ವಿಭಾಗ ೧೫ ನಿಮಿಷದ ವಿಶೇಷ ಕಾರ್ಯಕ್ರಮವನ್ನು ಪ್ರಸ್ತುತಪಡಿಸುತ್ತಿದ್ದು, ಈ ಕಾರ್ಯಕ್ರಮ ಇಂದು ರಾತ್ರಿ ೯.೧೫ಕ್ಕೆ ಆಕಾಶವಾಣಿಯ ಮುಖ್ಯ ವಾಹಿನಿಯಲ್ಲಿ ಮೂಡಿಬರಲಿದೆ.

<><*<><>*><>

ಪರಿಶಿಷ್ಟ ಸಮುದಾಯದಲ್ಲಿ ಒಳ ಮೀಸಲಾತಿ ಜಾರಿ ಮಾಡುವುದನ್ನು ರಾಜ್ಯ ಸರ್ಕಾರ ವಿನಾ ಕಾರಣ ಮುಂದೂಡುತ್ತಿರುವುದು ಖಂಡನೀಯ ಎಂದು ಸಂಸದ ಗೋವಿಂದ ಕಾರಜೋಳ ತುಮಕೂರಿನಲ್ಲಿಂದು ಹೇಳಿದ್ದಾರೆ. ಆಗಸ್ಟ್ ೧೫ರ ಬಳಿಕ, ರಾಜ್ಯ ಸರ್ಕಾರದ ವಿರುದ್ಧ, ರಾಜ್ಯಾದ್ಯಂತ ಹೋರಾಟ ಮಾಡುವ ಮೂಲಕ ಒಳ ಮೀಸಲಾತಿ ಜಾರಿ ಮಾಡುವಂತೆ, ಒತ್ತಡ ಹೇರಲಾಗುವುದು ಎಂದು ತಿಳಿಸಿದ್ದಾರೆ. ಮೀಸಲಾತಿ ಜಾರಿ ಮಾಡುವವರೆಗೂ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುವ ಜೊತೆಗೆ, ಅಸಹಕಾರ ಚಳವಳಿ ಮುಂದುವರಿಯಲಿದೆ ಎಂದು ಹೇಳಿದ್ದಾರೆ. ಶೀಘ್ರವೇ ಪರಿಶಿಷ್ಟ ಸಮುದಾಯದಲ್ಲಿ ಒಳ ಮೀಸಲಾತಿ ಜಾರಿ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

<><*<><>*><>

ಮಂಗಳೂರು ನಗರದಲ್ಲಿ ಅನಧಿಕೃತ ಕಟ್ಟಡ ನಿರ್ಮಾಣ ಕಾರ್ಯ ಕಂಡುಬಂದರೆ ಅಂತಹ ಕಟ್ಟಡಗಳ ವಿರುದ್ಧ ಕೆ.ಎಂ.ಸಿ ಕಾಯ್ದೆಯಡಿ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಮಂಗಳೂರು ಮಹಾನಗರ ಪಾಲಿಕೆ ಆಯುಕ್ತ ರವಿಚಂದ್ರ ನಾಯ್ಕ್ ಎಚ್ಚರಿಕೆ ನೀಡಿದ್ದಾರೆ. ನಗರಪಾಲಿಕೆ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಕಟ್ಟಡವನ್ನು ನಿರ್ಮಿಸುವ ಮೊದಲು ಕಡ್ಡಾಯವಾಗಿ ಕಟ್ಟಡ ಪರವಾನಿಗೆಯನ್ನು ಪಡೆದುಕೊಳ್ಳಬೇಕು. ಬಳಿಕ ಅನುಮೋದಿತ ನಕ್ಷೆಯನ್ವಯ ಕಟ್ಟಡ ನಿರ್ಮಿಸಬೇಕು. ತಪ್ಪಿದಲ್ಲಿ ಯಾವುದೇ ರೀತಿಯ ಸೇವಾ ಸಂಪರ್ಕಗಳನ್ನು ನೀಡುವುದಿಲ್ಲ ಎಂದು ಆಯುಕ್ತರು ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

<><*<><>*><>

ಉತ್ತರಕನ್ನಡ ಜಿಲ್ಲೆಯಲ್ಲಿ ನಿಯಮಬಾಹಿರವಾಗಿ ವಾಸ್ತವ್ಯ ಹೂಡಿರುವ ವಿದೇಶಿಗರ ಪತ್ತೆಗೆ ವಿಶೇಷ ಕಾರ್ಯಾಚರಣೆ ನಡೆಸಲಾಗುವುದು ಎಂದು ಉತ್ತರಕನ್ನಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್ ತಿಳಿಸಿದ್ದಾರೆ. ಕಾರವಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವೀಸಾ ಅವಧಿ ಮುಗಿದರೂ ಇಲ್ಲಿಯೇ ಉಳಿದುಕೊಂಡರೆ ಅದು ಅಕ್ರಮ. ಅಂತಹ ವಿದೇಶಿಗರನ್ನು ಪತ್ತೆ ಹಚ್ಚುವ ಕೆಲಸ ನಡೆಲಾಗುವುದು ಎಂದು ಹೇಳಿದ್ದಾರೆ. ಜಿಲ್ಲೆಯಲ್ಲಿ ೧೩ ಸಾವಿರದ ೪೭೩ ಟಿಬೇಟಿಯನ್ ಪ್ರಜೆಗಳು ಮುಂಡಗೋಡದ ಟಿಬೇಟಿಯನ್ ನಿರಾಶ್ರಿತ ಕೇಂದ್ರದಲ್ಲಿದ್ದಾರೆ. ಅವರ ಹೊರತಾಗಿ ಅಧ್ಯಯನ, ಪ್ರವಾಸ, ಉದ್ಯೋಗದ ನಿಮಿತ್ತ ವೀಸಾ ಪಡೆದುಕೊಂಡಿರುವ ೩೬೭ ವಿದೇಶಿಗರು ನೆಲೆಸಿದ್ದಾರೆ. ಅವರೆಲ್ಲರ ಮೇಲೆ ನಿಗಾ ಇರಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಜಿಲ್ಲೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಸೇರಿದಂತೆ ಯಾವುದೇ ನಿಯಮಬಾಹಿರ ಚಟುವಟಿಕೆ ನಡೆಸಲು ಅಸ್ಪದ ನೀಡುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ಗದಗ ಜಿಲ್ಲೆಯಲ್ಲಿ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ತೋಟಗಾರಿಕೆ ಬೆಳೆಗಳಾದ ಈರುಳ್ಳಿ ಮತ್ತು ಕೆಂಪುಮೆಣಸಿನಕಾಯಿ ಬೆಳೆಗಳಿಗೆ ವಿಮಾ ಸೌಲಭ್ಯ ಅಧಿಸೂಚನೆ ಹೊರಡಿಸಲಾಗಿದೆ. ಈರುಳ್ಳಿ ಮತ್ತು ಕೆಂಪುಮೆಣಸಿನಕಾಯಿ ಬೆಳೆಗೆ ವಿಮೆ ಕಂತು ಪಾವತಿಗೆ ಇದೇ ೩೧ ರಂದು ಕೊನೆಯ ದಿನವಾಗಿವೆ. ಮಳೆಯಾಶ್ರಿತ ಈರುಳ್ಳಿ ಮತ್ತು ಕೆಂಪುಮೆಣಸಿನಕಾಯಿ ಬೆಳೆಗೆ ವಿಮೆ ಕಂತು

ಪಾವತಿಗೆ ಆಗಸ್ಟ್ ೧೬ರಂದು ಕೊನೆಯ ದಿನವಾಗಿದೆ. ಆಸಕ್ತ ರೈತರು ವಿಮೆಗೆ ನೋಂದಾಯಿಸಿಕೊಳ್ಳಲು ಹತ್ತಿರದ ರಾಷ್ಟ್ರಿಕೃತ ಬ್ಯಾಂಕ್, ಸಾಮಾನ್ಯ ಸೇವಾ ಕೇಂದ್ರ, ಗ್ರಾಮ ಒನ್ ಕೇಂದ್ರಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಗದಗ ಜಿಲ್ಲಾ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ತಾರಾಮಣಿ ಜಿ.ಎಚ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ಗ್ರಾಮೀಣ ಭಾಗದ ಮಹಿಳೆಯರು ನಲ್ ಜಲ್ ಮಿತ್ರ ಯೋಜನೆ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಕಡೇಚೂರು ಗ್ರಾಮದ ಹೊರವಲಯದಲ್ಲಿ ನಡೆದ ನಲ್ ಜಲ್ ಮಿತ್ರ ಯೋಜನೆಯ ನೀರು ವಿತರಣಾ ನಿರ್ವಾಹಕರ ಬಹು ಕೌಶಲ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ತರಬೇತಿಯಲ್ಲಿ ವಿತರಿಸಲಾಗುವ ಕಿಟ್ ಕುರಿತು ಸಂಪೂರ್ಣ ಮಾಹಿತಿ ಪಡೆಯಬೇಕು ಎಂದು ಹೇಳಿದ್ದಾರೆ. ಇದರಿಂದ ಗ್ರಾಮ ಪಂಚಾಯಿತಿಯಲ್ಲಿ ಕೆಲಸ ನಿರ್ವಹಿಸುವಾಗ ಸಹಕಾರಿಯಾಗುತ್ತದೆ. ಮಹಿಳೆಯರಿಗೆ ನಲ್ಲಿ ನೀರಿನ ವಿತರಣಾ ವ್ಯವಸ್ಥೆ ಮತ್ತು ನೀರಿನ ಪ್ರಾತ್ಯಕ್ಷಿಕೆ ನೀಡಬೇಕು ಎಂದು ಸೂಚಿಸಿದ್ದಾರೆ.

**<><*<><>*><>**

ರಾಜ್ಯದ ಉತ್ತರ ಒಳನಾಡಿನಲ್ಲಿ ನೈಋತ್ಯ ಮಾನ್ಸೂನ್ ತೀವ್ರವಾಗಿತ್ತು. ಕರಾವಳಿ ಕರ್ನಾಟಕ ಮತ್ತು ದಕ್ಷಿಣ ಒಳನಾಡಿನಲ್ಲಿ ಸಾಮಾನ್ಯವಾಗಿತ್ತು. ಇಂದು ದಕ್ಷಿಣ ಕನ್ನಡ, ಉಡುಪಿ, ಉತ್ತರಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿದ್ದು, ಹಗುರದಿಂದ ಸಾಧಾರಣವಾಗಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ಮುನ್ನೆಚ್ಚರಿಕೆ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**